ಓ.ಎಸ್.198/2017
ಪಿ.ಡಬ್ಲ್ಯೂ-2

ದಿನಾಂಕಃ **13.10.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಡಿವಿಎಸ್ ವಕೀಲರಿಂದಃ</u>

ದೊಡ್ಡಹೊಸಹಳ್ಳಿ ಗ್ರಾಮದಲ್ಲಿ ನನಗೆ ಯಾವುದೇ ಜಮೀನು ಇರುವುದಿಲ್ಲ. 3 ನೇ ವಾದಿ ನಮ್ಮ ಗ್ರಾಮದಲ್ಲಿ ಮದುವೆಯಾಗಿರುವುದರಿಂದ ನನಗೆ ಅವರ ಪರಿಚಯ ಇರುತ್ತದೆ. 3 ನೇ ವಾದಿಯ ತಾತನ ಹೆಸರು ನನಗೆ ಗೊತ್ತಿರುವುದಿಲ್ಲ. 3 ನೇ ವಾದಿಯ ತಾತನಿಗೆ ಎಷ್ಟು ಜನ ಮಕ್ಕಳು ಎಂದು ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತುಗಳು ಮೂಲತಃ ಯಾರಿಗೆ ಸೇರಿದ್ದವು ಎಂದು ಪ್ರಶ್ನಿಸಿದ್ದಕ್ಕೆ ಸಾಕ್ಷಿಯು ರಾಮಚಂದ್ರಯ್ಯರವರೊಂದಿಗೆ ನಾನು ಹೋಗಿ ಹೊಲ ಉಳುಮೆ ಮಾಡುತ್ತಿದ್ದೆ ಆದರೆ ಅವರು ಯಾರೊಂದಿಗೆ ಜಂಟಿ ಸ್ವಾಧೀನದಲ್ಲಿರುತ್ತಾರೆ ಮತ್ತು ಅವರ ಅಣ್ಣ-ತಮ್ಮಂದಿರ ವ್ಯವಹಾರಗಳ ಬಗ್ಗೆ ನನಗೆ ಸಂಪೂರ್ಣವಾಗಿ ಗೊತ್ತಿರುವುದಿಲ್ಲ ಎಂದು ಉತ್ತಿರಿಸಿರುತ್ತಾರೆ. ದಾವಾ ಸ್ವತ್ತುಗಳು ಸರ್ವೆ ನಂಬರ್, ವಿಸ್ತೀರ್ಣ ಮತ್ತು ಚಕ್ಕುಬಂಧಿ ನನಗೆ ಗೊತ್ತಿರುವುದಿಲ್ಲ.

**2.** ದಾವಾ 1 ನೇ ಆಸ್ತಿಗೆ ಸಂಬಂಧಿಸಿದಂತೆ ಯಲ್ಲಪ್ಪ 1 ನೇ ಪ್ರತಿವಾದಿಗೆ ದಾನ ಪತ್ರ ಬರೆದುಕೊಟ್ಟಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ನಾನು ರಾಮಚಂದ್ರಯ್ಯರವರೊಂದಿಗೆ ಹೋಗಿ ಬರುತ್ತಿದ್ದ ಕಾರಣ ದಾವಾ 1 ನೇ ಆಸ್ತಿಗೆ ದಾನ ಪತ್ರ ಬರೆದುಕೊಟ್ಟಿರುವುದಿಲ್ಲ ಎಂದು ನನಗೆ ಗೊತ್ತಿರುತ್ತದೆ. ದಾವಾ 2 ರಿಂದ 4 ನೇ ಆಸ್ತಿಗಳು ವಾದಿಗಳ ಕುಟುಂಬಕ್ಕೆ ಹೇಗೆ ಬಂದಿರುತ್ತವೆ ಎಂದು ನನಗೆ ಗೊತ್ತಿರುವುದಿಲ್ಲ.

3. ನಾನು 3 ನೇ ವಾದಿಯೊಂದಿಗೆ ಯಾವುದೇ ದಿನದಂದು ದಾವಾ ಸ್ವತ್ತುಗಳನ್ನು ಸಾಗುವಳಿ ಮಾಡದೇ ಇದ್ದರೂ ಸಹ 3 ನೇ ವಾದಿಯ ಹೇಳಿಕೆಯ ಮೇರೆಗೆ ವಾದಿಗಳಿಗೆ ಸಹಾಯ ಮಾಡಲು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ